**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿಕಲಾಂಗರಿಗೆ ಮೀಸಲಿರಿಸುವ ಅನುದಾನವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** (1) ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 77 ಯೋವಿವಿ 2013, ದಿನಾಂಕ:17.05.2014.
(2) ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರ ಪತ್ರ ದಿನಾಂಕ:04.11.2016.
(3) ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ದಿನಾಂಕ:21.12.2016

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಸದರಿ ಮಾರ್ಗಸೂಚಿಗಳ ಕಂಡಿಕೆ-2.14 ರಲ್ಲಿ ಅಂಗವಿಕಲರಿಗಾಗಿ ಪ್ರತಿ ವರ್ಷ ಗರಿಷ್ಠ ರೂ.10.00 ಲಕ್ಷಗಳನ್ನು ಒದಗಿಸಲು ಅವಕಾಶ ಕಲ್ಪಿಸಿ, ಸದರಿ ಅನುದಾನದಿಂದ ಅಂಗವಿಕಲರಿಗೆ ತ್ರಿಚಕ್ರ ವಾಹನ ಮತ್ತು ಕೃತಕ ಕಾಲುಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ಓದಲಾದ ಪತ್ರಗಳಲ್ಲಿ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಮತ್ತು ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಂಗವಿಕಲರಿಗಾಗಿ ವಾರ್ಷಿಕ ಮೀಸಲಿರಿಸಿರುವ ಮೊತ್ತ ರೂ.10.00 ಲಕ್ಷಗಳನ್ನು ಹೆಚ್ಚಿಸಲು ಮಾನ್ಯ ವಿಧಾನಸಭಾ ಸದಸ್ಯರುಗಳು ಕೋರಿರುತ್ತಾರೆಂದು ತಿಳಿಸುತ್ತಾ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಂಗವಿಕಲರಿಗಾಗಿ ಮೀಸಲಿರಿಸಿರುವ ವಾರ್ಷಿಕ ಮೊತ್ತ ರೂ.10.00 ಲಕ್ಷಗಳನ್ನು ಹೆಚ್ಚಿಸಲು ಕೋರಿರುತ್ತಾರೆ. ಜಿಲ್ಲಾಧಿಕಾರಿಗಳ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 174 ಯೋವಿವಿ 2016, ಬೆಂಗಳೂರು, 14ನೇ ಮಾರ್ಚ್ 2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳ ಕಂಡಿಕೆ-2.14 ರಲ್ಲಿ ವಿಕಲಾಂಗರಿಗಾಗಿ ಪ್ರತಿ ವರ್ಷ ಮೀಸಲಿರಿಸಿರುವ ರೂ.10.00 ಲಕ್ಷಗಳನ್ನು ರೂ.20.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಫೀ ಅಹಮದ್.ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

14/03/17

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಗೆ 1000 ಪ್ರತಿಗಳನ್ನು ಪೂರೈಸಲು.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ವಿಧಾನಸಭೆ/ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳು.

3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ.
5. ಸನ್ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಮಾನ್ಯ ಸಚಿವರುಗಳ ಆಪ್ತಕಾರ್ಯದರ್ಶಿಗಳು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
12. ಸರ್ಕಾರದ ಉಪ ಕಾರ್ಯದಶಿಯವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
13. ನಿರ್ದೇಶಕರು, ಎಡಿಬಿ ವಿಭಾಗ ಇವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
14. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ(ಕಾಂಪೆಂಡಿಯಮ್‌ಗೋಸ್ಕರ).
15. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.